ಕರ್ನಾಟಕ ಸರ್ಕಾರ

*ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ ಐವಾನ್-ಎ-ಶಾಹಿ ಬಡಾವಣೆ ಗುಲ್ಬರ್ಗಾ*

ಸಂಖ್ಯೆ:ಸಿ1(1)ಆಡಳಿತ:ಸಿಬ್ಬಂದಿ:ಪವ್ಯ:ಬಡ್ತಿ:34:2013-14 ದಿನಾಂಕ:01.02.2014

## ಜ್ಞಾ ಪ ನ

ವಿಷಯ:-ಗುಲ್ಬರ್ಗಾ ವಿಭಾಗ ವ್ಯಾಪ್ತಿಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರಿಗೆ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

ಉಲ್ಲೇಖ:-01)ಸರ್ಕಾರದ ಆದೇಶ ಸಂಖ್ಯೆ ಇಡಿ 250 ಡಿಪಿಐ 2006 ದಿನಾಂಕ:22.02.2008

02)ಸರ್ಕಾರದ ಆದೇಶ ಸಂಖ್ಯೆ ಇಡಿ 464 ಡಿಪಿಐ 2008 ದಿನಾಂಕ:06.01.2009

03)ಈ ಕಛೇರಿ ಅಧಿಸೂಚನೆ ಸಂಖ್ಯೆ ಸಿ1(1) ಆಡಳಿತ ಸಿಬ್ಬಂದಿ ಅಧೀಕ್ಷಕ ಜೇಪ 94/12-13 ದಿನಾಂಕ:17.06.2013

04)ದಿನಾಂಕ:31.01.2014 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡುವಳಿಗಳು.

===

ಸಾರ್ವಜನಿಕ ಶಿಕ್ಷಣ ಇಲಾಖೆ ಗುಲ್ಬರ್ಗಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧೀಕ್ಷಕರ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ (03)ರಂತೆ ಪ್ರಕಟಿಸಲಾಗಿ ಅದರಲ್ಲಿನ ನೌಕರರಿಗೆ ಹುದ್ದೆಗಳ ಲಭ್ಯತೆಯ ಮತ್ತು ಜೇಷ್ಠತೆ ಆಧಾರದ ಮೇಲೆ ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 22 ಎಸ್‌ಬಿಸಿ 79 ದಿನಾಂಕ 30.08.1979ರ ಮಿಸಲಾತಿ ನಿಯಮಗಳ ಪ್ರಕಾರ ಅರ್ಹತೆ ಹೊಂದಿದ ಅಧೀಕ್ಷಕರನ್ನು ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ಉಲ್ಲೇಖ (01) ಹಾಗೂ (02)ರಲ್ಲಿ ಸೂಚಿಸಿದಂತೆ ಬಡ್ತಿ ನೀಡಲು ಪರಿಗಣಿಸಿ ಈ ಕೆಳಗಿನಂತೆ ಆದೇಶಿಸಿದೆ.

## ::ಆದೇಶ::

ಪೀಠಿಕೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಜೇಷ್ಠತೆ ಮತ್ತು ಮೀಸಲಾತಿ ನಿಯಮಗಳನ್ವಯ ಅನುಬಂಧ-01 ರಲ್ಲಿರುವ ಅಧೀಕ್ಷಕರಿಗೆ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ವೇತನ ಶ್ರೇಣಿ ರೂ.21600-40050 ರಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

**ಷರತ್ತುಗಳು:**

1. ಈ ಆದೇಶ ತಲುಪಿದ 15 ದಿನಗಳ ಒಳಗಾಗಿ ಬಡ್ತಿ ನೀಡಿ ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗುವುದು ತಪ್ಪಿದ್ದಲ್ಲಿ ನಿಯಮಾನುಸಾರ ಬಡ್ತಿಯನ್ನು ರದ್ದುಪಡಿಸಲಾಗುವುದು.
2. ಅನುಬಂಧ-01 ರಲ್ಲಿರುವ ನೌಕರರು ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಕ.ನಾ.ಸೇ.ನಿಯಮ 42(ಬಿ) ರನ್ವಯ ವೇತನ ನಿಗದಿಗೆ ಅರ್ಹರಿರುತ್ತಾರೆ.
3. ನಿಗದಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆ ಹೊಂದಿರುವ ಬಗ್ಗೆ ಕಛೇರಿ ಮುಖ್ಯಸ್ಥರು ಸೂಕ್ತ ದಾಖಲೆಗಳನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.
4. ಈ ನೌಕರರ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಸದರಿ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ ಇದನ್ನು ಖಚಿತಪಡಿಸಿಕೊಳ್ಳುವುದು.

ಪುಟ-02ಕ್ಕೆ

5. ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿರತಕ್ಕದ್ದು, ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ನೌಕರರುಗಳನ್ನು ಸ್ಥಾನಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.
6. ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಬಡ್ತಿ ನೀಡುವಾಗ ತಪ್ಪಾಗಿ ಮಾಹಿತಿಯನ್ನು ನೀಡಿದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೇ ಬಡ್ತಿಯನ್ನು ಹಿಂಪಡೆಯಲಾಗುವುದು.
7. ಈ ಮುಂಬಡ್ತಿ ತಾತ್ಕಾಲಿಕವಾಗಿದ್ದು, ಕಾನೂನಿನ್ವಯ ಯಾವುದೇ ಲೋಪಗಳು ಕಂಡುಬಂದಲ್ಲಿ ಯಾವುದೇ ಮುನ್ಸೂಚನೆಯಿಲ್ಲದೆ ಮುಂಬಡ್ತಿಯನ್ನು ಹಿಂಪಡೆಯುವ ಅಧಿಕಾರ ಇಲಾಖಾ ಮುಂಬಡ್ತಿ ಸಮಿತಿಗೆ ಇರುತ್ತದೆ.

(ರಾಧಾಕೃಷ್ಣರಾವ ಮದನಕರ)
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಗಳನ್ನು

1. ಮಹಾಲೇಖಪಾಲರು ಕರ್ನಾಟಕ ರಾಜ್ಯ ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು.
3. ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು / ಧಾರವಾಡ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಬೀದರ.
5. ಉಪ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ
6. ಕ್ಷೇತ್ರ ಶಿಕ್ಷಣಾಧಿಕಾರಿ, ಔರಾದ (ಬಿ) ಜಿ: ಬೀದರ.
7. ಸಂಬಂಧಿಸಿದ ಸಂಸ್ಥೆ / ಕಛೇರಿ ಮುಖ್ಯಸ್ಥರಿಗೆ.
8. ಸಂಬಂಧಿಸಿದ ನೌಕರರಿಗೆ.
9. ಕಛೇರಿಯ ಆಯುಕ್ತರ / ನಿರ್ದೇಶಕರು / ಸಹ ನಿರ್ದೇಶಕರು (ಆಡಳಿತ) ಮತ್ತು (ಪರೀಕ್ಷೆ) ರವರ ಆಪ್ತ ಶಾಖೆಗೆ.
10. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

*ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ ಐವಾನ್-ಎ-ಶಾಹಿ ಬಡಾವಣೆ ಗುಲ್ಬರ್ಗಾ*

ಸಂಖ್ಯೆ:ಸಿ1(1)ಆಡಳಿತ:ಸಿಬ್ಬಂದಿ:ಪವ್ಯ:ಬಡ್ತಿ:34:2013–14 ದಿನಾಂಕ:01.02.2014

ಅನುಬಂಧ–1

ಗುಲ್ಬರ್ಗಾ ವಿಭಾಗದ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧೀಕ್ಷಕರಿಗೆ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಿದ ಪಟ್ಟಿ.

| ಕ್ರ.ಸಂ | ನೌಕರರ ಹೆಸರು, ಪದನಾಮ ಮತ್ತು ಕಾರ್ಯನಿರ್ವಹಿಸುತ್ತಿರುವ ಶಾಲಾ/ ಕಛೇರಿ ವಿಳಾಸ | ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿ ವಿಳಾಸ |
|---|---|---|
| 01 | ಶ್ರೀ ಪ್ರಕಾಶ ತಂದೆ ಚಂದ್ರಪ್ಪ ಟಾಳೆ,<br>ಅಧೀಕ್ಷಕರು<br>ಉಪ ನಿರ್ದೇಶಕರ ಕಛೇರಿ,<br>ಸಾರ್ವಜನಿಕ ಶಿಕ್ಷಣ ಇಲಾಖೆ, ಬೀದರ | ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಔರಾದ (ಬಿ)<br>ಜಿ: ಬೀದರ |

( ರಾಧಾಕೃಷ್ಣರಾವ ಮದನಕರ )
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ